**ಕರ್ನಾಟಕ ವಿಧಾನ ಪರಿಷತ್**

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 209

02. ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)

03. ಉತ್ತರಿಸುವ ದಿನಾಂಕ : 06.07.2023

04. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಹಾಗೂ ಅದರ ಪಕ್ಕದ ರಸ್ತೆಗಳಲ್ಲಿ ಕಳ್ಳತನ ಹಾಗೂ ಸುಲಿಗೆ ಪ್ರಕರಣಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>**ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಕಳ್ಳತನ, ಸುಲಿಗೆ ಪ್ರಕರಣಗಳನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**<br><br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಕಳ್ಳತನ ಪ್ರಕರಣಗಳನ್ನು ತಡೆಗಟ್ಟುವ ಸಲುವಾಗಿ ಠಾಣೆಯಲ್ಲಿರುವ ಪಿ.ಎಸ್.ಐ ಮತ್ತು ಸಿಬ್ಬಂದಿಯವರನ್ನು ನೇಮಕ ಮಾಡಲಾಗಿದೆ.<br><br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಪ್ರತಿ ದಿನ ಹಗಲು ಮತ್ತು ರಾತ್ರಿ ಪಾಳಿಯಂತೆ ಎರಡು ಹೊಯ್ಸಳ ವಾಹನಗಳನ್ನು ಗಸ್ತು ಕರ್ತವ್ಯಕ್ಕೆ ನೇಮಕ ಮಾಡಿ, ಅಪರಾಧ ಪ್ರಕರಣಗಳನ್ನು ತಡೆಗಟ್ಟಲಾಗುತ್ತಿರುತ್ತದೆ.<br><br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಚೀತಾ ಮತ್ತು ಬೀಟ್ ಸಿಬ್ಬಂದಿಗಳನ್ನು ಗಸ್ತು ಕರ್ತವ್ಯಕ್ಕೆ ನೇಮಕ ಮಾಡಿ, ಅಪರಾಧ ಪ್ರಕರಣಗಳನ್ನು ತಡೆಗಟ್ಟಲಾಗುತ್ತಿರುತ್ತದೆ.<br><br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಅಪರಾಧ ವಿಭಾಗದ ಸಿಬ್ಬಂದಿಯವರನ್ನು ಮಫ್ತಿಯಲ್ಲಿ ಕರ್ತವ್ಯಕ್ಕೆ ನೇಮಿಸಿ, ಆರೋಪಿಗಳನ್ನು ಪತ್ತೆ ಮಾಡಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. |

| | | |
|---|---|---|
| ಆ | ನಿಲ್ದಾಣದಲ್ಲಿರುವ ಪೊಲೀಸ್ ಹೊರ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; 2022ನೇ ಸಾಲಿನಿಂದ ಇಲ್ಲಿಯವರೆಗೆ ಈ ಸ್ಥಳದಲ್ಲಿ ಕಳ್ಳತನ ಹಾಗೂ ಸುಲಿಗೆಗಳಲ್ಲಿ ದಾಖಲಾದ ಪ್ರಕರಣಗಳು ಎಷ್ಟು; ಪ್ರಕರಣಗಳ ವಿರುದ್ಧ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು) | ಉಪ್ಪಾರಪೇಟೆ ಪೊಲೀಸ್ ಹೊರ ಠಾಣೆಗೆ 1 (ಒಬ್ಬರು) ಪಿ.ಎಸ್.ಐ ರವರನ್ನು ಉಸ್ತುವಾರಿ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ ಹಾಗೂ ಹಗಲು ಮತ್ತು ರಾತ್ರಿ ಪಾಳಿಯ ಕರ್ತವ್ಯಕ್ಕೆ ಪ್ರತ್ಯೇಕವಾಗಿ ಪ್ರತಿದಿನ ಗಸ್ತು ಕರ್ತವ್ಯಕ್ಕೆ ಒಂದು ಚೀತಾ ಮತ್ತು 7 ಜನ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಲಾಗಿರುತ್ತದೆ.<br><br>2022ನೇ ಸಾಲಿನಿಂದ ಇಲ್ಲಿಯವರೆಗೆ ಈ ಸ್ಥಳದಲ್ಲಿ ಕಳ್ಳತನ ಹಾಗೂ ಸುಲಿಗೆಗಳಲ್ಲಿ ದಾಖಲಾದ ಪ್ರಕರಣಗಳ ವಿವರಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಇ | ನಿಲ್ದಾಣಗಳಲ್ಲಿ ಸಿ.ಸಿ.ಟಿ.ವಿ ವ್ಯವಸ್ಥೆ ಸರಿಯಾಗಿ ಇಲ್ಲದಿರುವುದು ಮತ್ತು ಪೊಲೀಸರು ನಿರಂತರವಾಗಿ ಗಸ್ತು ತಿರುಗಲು ನಿರ್ಲಕ್ಷ್ಯ ವಹಿಸುತ್ತಿರುವುದು ಹಾಗೂ ಭದ್ರತೆಗೆ ಸರಿಯಾದ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಲಾಗಿರುತ್ತದೆ.<br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಗಸ್ತು ಕರ್ತವ್ಯಕ್ಕಾಗಿ ಪ್ರತಿ 3 ಗಂಟೆಗೆ ಒಬ್ಬರಂತೆ ಪಿ.ಎಸ್.ಐ ರವರನ್ನು ನೇಮಿಸಿರುತ್ತದೆ.<br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಪ್ರತಿ ದಿನ ಹಗಲು ಮತ್ತು ರಾತ್ರಿ ಪಾಳಿಯಂತೆ ಎರಡು ಹೊಯ್ಸಳಗಳನ್ನು ಗಸ್ತು ಕರ್ತವ್ಯಕ್ಕೆ ನೇಮಕ ಮಾಡಿರುತ್ತದೆ.<br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಚೀತಾ ಮತ್ತು ಬೀಟ್ ಸಿಬ್ಬಂದಿಗಳನ್ನು ಗಸ್ತು ಕರ್ತವ್ಯಕ್ಕೆ ನೇಮಕ ಮಾಡಿರುತ್ತದೆ.<br>➢ ಮೆಜೆಸ್ಟಿಕ್, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಅಪರಾಧ ವಿಭಾಗದ ಸಿಬ್ಬಂದಿಯವರನ್ನು ಮಫ್ತಿಯಲ್ಲಿ ಗಸ್ತು ಕರ್ತವ್ಯಕ್ಕಾಗಿ ನೇಮಕ ಮಾಡಲಾಗಿರುತ್ತದೆ. |

HD/16/PCQ/2023

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

# ಅನುಬಂಧ

## 2022ನೇ ಸಾಲಿನಲ್ಲಿ ವರದಿ & ಪತ್ತೆಯಾದ ಕಳ್ಳತನ ಮತ್ತು ಸುಲಿಗೆ ಪ್ರಕರಣಗಳ ವಿವರ

| ವರದಿಯಾದ ಕಳ್ಳತನ/ಸಾಮಾನ್ಯ ಕಳವು ಪ್ರಕರಣಗಳ ವಿವರ | ಪತ್ತೆಯಾದ ಕಳ್ಳತನ/ಸಾಮಾನ್ಯ ಕಳವು ಪ್ರಕರಣಗಳ ವಿವರ | ವರದಿಯಾದ ಸುಲಿಗೆ ಪ್ರಕರಣಗಳ ವಿವರ | ಪತ್ತೆಯಾದ ಸುಲಿಗೆ ಪ್ರಕರಣಗಳ ವಿವರ |
|---|---|---|---|
| 46 | 18 | 01 | 01 |

## 2023ನೇ ಸಾಲಿನಲ್ಲಿ (ದಿನಾಂಕ:26.06.2023 ರವರೆಗೆ ) ವರದಿ & ಪತ್ತೆಯಾದ ಕಳ್ಳತನ ಮತ್ತು ಸುಲಿಗೆ ಪ್ರಕರಣಗಳ ವಿವರ

| ಕಳ್ಳತನ/ಸಾಮಾನ್ಯ ಕಳವು ಪ್ರಕರಣಗಳ ವಿವರ | ಪತ್ತೆಯಾದ ಕಳ್ಳತನ/ಸಾಮಾನ್ಯ ಕಳವು ಪ್ರಕರಣಗಳ ವಿವರ | ವರದಿಯಾದ ಸುಲಿಗೆ ಪ್ರಕರಣಗಳ ವಿವರ | ಪತ್ತೆಯಾದ ಸುಲಿಗೆ ಪ್ರಕರಣಗಳ ವಿವರ |
|---|---|---|---|
| 29 | 04 | 01 | 01 |